## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ "ವಿದ್ಯಾರ್ಥಿವೇತನ ಕೋಶ" ರಚಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕಇ/ಇಡಿ-07/ಸಿಆರ್-/2020-21, ದಿನಾಂಕ: 01-02-2021.

ಪ್ರಸ್ತಾವನೆ:

2020-21ನೇ ಸಾಲಿನಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಶಾಲಾ/ ಕಾಲೇಜುಗಳು ತಡವಾಗಿ ಪ್ರಾರಂಭವಾಗಿರುವುದರಿಂದ, ಸದರಿ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರು ಮಾಡುವ ಸಂಬಂಧ ದಿನಾಂಕ:19-11-2020 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಆರ್ಥಿಕ ವರ್ಷದ ನವೆಂಬರ್ ಮಾಹೆಯ ಅಂತ್ಯದಲ್ಲಿರುವುದರಿಂದ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಸಕಾಲದಲ್ಲಿ ಮಂಜೂರು ಮಾಡುವ ಉದ್ದೇಶದಿಂದ "ವಿದ್ಯಾರ್ಥಿವೇತನ ಕೋಶ" ರಚಿಸುವಂತೆ ನಡವಳಿಯಲ್ಲಿ ತಿಳಿಸಿರುತ್ತಾರೆ.

ಮುಂದುವರೆದು, ನೋಡಲ್ ಅಧಿಕಾರಿಯು ಸಮಾಜ ಕಲ್ಯಾಣ ಇಲಾಖೆಯ ಸಚಿವಾಲಯ, ಆಯುಕ್ತಾಲಯ ಮತ್ತು ಇ-ಆಡಳಿತ ಇಲಾಖೆಗೆ ಭೇಟಿ ನೀಡಲು ಹಾಗೂ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನ ಸಂಬಂಧ ರಾಜ್ಯದ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಬೇಕಾಗಿರುತ್ತದೆ. ಆದ್ದರಿಂದ, ವಿದ್ಯಾರ್ಥಿವೇತನ ಕೋಶಕ್ಕೆ ಪ್ರತ್ಯೇಕ ವಾಹನ ಸೌಲಭ್ಯ ಅವಶ್ಯಕತೆ ಇರುತ್ತದೆ. ಭಾರತ ಸರ್ಕಾರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಮಾರ್ಗಸೂಚಿಯನ್ವಯ Addministrative Charges ರಡಿ ಕಾರ್ಯಕ್ರಮದ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ಶೇಕಡ 1% ರಷ್ಟು ಅನುದಾನವನ್ನು ಬಳಕೆ ಮಾಡಿಕೊಳ್ಳಲು ಅವಕಾಶವಿರುತ್ತದೆ. ಸದರಿ ಕಛೇರಿಯನ್ನು ಸಂಪಂಗಿ ರಾಮನಗರದ ಇಲಾಖೆಯ ಸ್ವಂತ ಕಟ್ಟಡದಲ್ಲಿ ತಾತ್ಕಾಲಿಕವಾಗಿ ಪ್ರಾರಂಭಿಸಲು ಮತ್ತು ಕಟ್ಟಡದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒಳಗೊಂಡಂತೆ ಸ್ಥಳಾವಕಾಶ ಕಲ್ಪಿಸಿಕೊಳ್ಳುವ ಸಲುವಾಗಿ ಈ ಕೆಳಕಂಡ ಅಧಿಕಾರಿ/ನೌಕರರ ನಿಯೋಜನೆ ಮೂಲಕ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಗೊಳಿಸುವ ಸಂಬಂಧ ರಾಜ್ಯ ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಅನುಷ್ಠಾನ ಮಾಡುವ ಸಂಬಂಧ "ವಿದ್ಯಾರ್ಥಿವೇತನ ಕೋಶ" ರಚಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ. | ಪದನಾಮ | | ಹುದ್ದೆಗಳ ವಿವರ |
|---|---|---|---|
| 1 | ನೋಡಲ್ ಅಧಿಕಾರಿ | ಉಪ ನಿರ್ದೇಶಕರು (ಶಿಕ್ಷಣ), ಆಯುಕ್ತರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು | 01 |

| | | | |
|---|---|---|---|
| | | ಸದರಿ ಕೋಶದ ನೋಡಲ್ ಅಧಿಕಾರಿಯಾಗಿರುತ್ತಾರೆ. (ವೇತನ ಶ್ರೇಣಿ: 67550–104600) | |
| 2 | ಸಹಾಯಕ ನಿರ್ದೇಶಕರು (ಗ್ರೇಡ್ – 2) (ವೇತನ ಶ್ರೇಣಿ :43100-83900) | | 01 |
| 3 | ಕಛೇರಿ ಅಧೀಕ್ಷಕರು (ವೇತನ ಶ್ರೇಣಿ :37900-70850) | | 02 |
| 4 | Technical Consultant | | 02 |
| 5 | ಪ್ರಥಮ ದರ್ಜೆ ಸಹಾಯಕರು | | 02 |
| 6 | ದ್ವಿತೀಯ ದರ್ಜೆ ಸಹಾಯಕರು | | 02 |
| 7 | ಡೇಟಾ ಎಂಟ್ರಿ ಆಪರೇಟರ್ಸ್ | | 03 |
| 8 | ವಾಹನ ಚಾಲಕರು | | 01 |
| 9 | ಗ್ರೂಪ್ 'ಡಿ" ನೌಕರರು | | 02 |

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 95 ಪಕವಿ 2021, ಬೆಂಗಳೂರು, ದಿನಾಂಕ: 17-03-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಅನುಷ್ಠಾನ ಮಾಡುವ ಸಂಬಂಧ ವಿದ್ಯಾರ್ಥಿವೇತನ ಕೋಶದ ಕಛೇರಿಯನ್ನು ಸಂಪಂಗಿ ರಾಮನಗರದ ಇಲಾಖೆಯ ಸ್ವಂತ ಕಟ್ಟಡದಲ್ಲಿ ತಾತ್ಕಾಲಿಕವಾಗಿ ಪ್ರಾರಂಭಿಸಲು ಮತ್ತು ನೋಡಲ್ ಅಧಿಕಾರಿಯ ವಾಹನ ಸೌಲಭ್ಯಕ್ಕೆ ಭಾರತ ಸರ್ಕಾರದ ವಿದ್ಯಾರ್ಥಿವೇತನ ಕಾರ್ಯಕ್ರಮದ ಮಾರ್ಗಸೂಚಿಯನ್ವಯ Administrative Charges ರಡಿ ಕಾರ್ಯಕ್ರಮದ ಅನುಷ್ಠಾನ ಹಾಗೂ ಮೇಲ್ವಿಚಾರಣೆಗೆ ಶೇಕಡ 1% ರಷ್ಟು ಅನುದಾನವನ್ನು ಬಳಕೆ ಮಾಡಿಕೊಳ್ಳಲು ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಲುವಾಗಿ ಹಾಲಿ ಇರುವ ಅಧಿಕಾರಿ / ಸಿಬ್ಬಂದಿಗಳನ್ನು ಸದರಿ ಕೋಶಕ್ಕೆ ನಿಯೋಜಿಸಿಕೊಂಡು "ವಿದ್ಯಾರ್ಥಿವೇತನ ಕೋಶ" ರಚಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

| ಕ್ರ. ಸಂ. | ಪದನಾಮ | | ಹುದ್ದೆಗಳ ವಿವರ |
|---|---|---|---|
| 1 | ನೋಡಲ್ ಅಧಿಕಾರಿ | ಉಪ ನಿರ್ದೇಶಕರು (ಶಿಕ್ಷಣ), ಆಯುಕ್ತರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸದರಿ ಕೋಶದ ನೋಡಲ್ ಅಧಿಕಾರಿಯಾಗಿರುತ್ತಾರೆ. (ವೇತನ ಶ್ರೇಣಿ: 67550–104600) | 01 |
| 2 | ಸಹಾಯಕ ನಿರ್ದೇಶಕರು (ಗ್ರೇಡ್ – 2) (ವೇತನ ಶ್ರೇಣಿ :43100-83900) | | 01 |
| 3 | ಕಛೇರಿ ಅಧೀಕ್ಷಕರು (ವೇತನ ಶ್ರೇಣಿ :37900-70850) | | 02 |
| 4 | Technical Consultant | | 02 |
| 5 | ಪ್ರಥಮ ದರ್ಜೆ ಸಹಾಯಕರು | | 02 |

| | | |
|---|---|---|
| 6 | ದ್ವಿತೀಯ ದರ್ಜೆ ಸಹಾಯಕರು · | 02 |
| 7 | ಡೇಟಾ ಎಂಟ್ರಿ ಆಪರೇಟರ್ಸ್ | 03 |
| 8 | ವಾಹನ ಚಾಲಕರು | 01 |
| 9 | ಗ್ರೂಪ್ 'ಡಿ' ನೌಕರರು | 02 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಲ್. ನರಸಿಂಹಮೂರ್ತಿ) 17/3
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಸರ್ಕಾರದ ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-2)ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಖಜಾನೆ ಇಲಾಖೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.
6. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಬೆಂಗಳೂರು.
8. ಎಲ್ಲಾ ಜಿಲ್ಲಾಧಿಕಾರಿಗಳಿಗೆ.
9. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
10. ಸಮಾಜ ಕಲ್ಯಾಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು/ ಉಪನಿರ್ದೇಶಕರು.
11. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ.
12. ಸಂಬಂಧಿಸಿದ ಎಲ್ಲಾ ಜಿಲ್ಲಾ/ತಾಲ್ಲೂಕು ಉಪ ಖಜಾನಾಧಿಕಾರಿಗಳು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.

* * * *